**ದಿನಾಂಕ: 08.03.2021 ರಂದು 10-30 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| **ಸದಸ್ಯರುಗಳು** | ಬೆಸ್ಕಾಂ ಅಧಿಕಾರಿಗಳು |
| **ಸದಸ್ಯರುಗಳು** | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ರೋಡ್ ಇನ್‌ಫ್ರಾ) |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಇಲಾಖೆ ಅಧಿಕಾರಿಗಳು |
| **ಸದಸ್ಯರುಗಳು** | ಮಾರ್ಷಲ್ |
| **ಸಾರ್ವಜನಿಕರು** | ಶ್ವೇತಾ .ಎಸ್ WOW GROUP (WOW) |
| **ಸಾರ್ವಜನಿಕರು** | ಶಕೀಲಾ ಭಾನು RWA- WOW GROUP |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಪು.ತಿ.ನೋ**

<u>ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.</u>

- 9ನೇ ಮುಖ್ಯರಸ್ತೆಯಲ್ಲಿರುವ ಮೇಲ್ಸೈಯಲ್ಲಿ ಹರಿಯುವ ನೀರನ್ನು ಸರಾಗವಾಗಿ ಚರಂಡಿ ಮೋರಿಗೆ ಹೋಗುವಂತೆ ಸರಿಪಡಿಸಲು ಶ್ರೀ ಸುನೀಲ್‌ರವರು ಕೋರಿದರು.
- ವಾರ್ಡ್ ಸಂಖ್ಯೆ 177ರಲ್ಲಿ Dry Waste Collection Center ಬಳಿ ಬೀದಿ ದೀಪ ಅಳವಡಿಸಲು ಶ್ರೀಮತಿ ಶ್ವೇತಾ ರವರು ಕೋರಿದರು.
- 17ನೇ ಎ ಮುಖ್ಯರಸ್ತೆಯಲ್ಲಿ ಮರದ ರೆಂಬೆ, ಕೊಂಬೆಗಳನ್ನು ಕತ್ತರಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಕೋರಿದರು.
- ರಾಗಿಗುಡ್ಡ ಸ್ಲಂನಲ್ಲಿ ಸ್ಯಾನಿಟರಿ ಲೈನ್ ಸಮಸ್ಯೆಯನ್ನು ಬಗೆಹರಿಸುವ ಬಗ್ಗೆ ಚರ್ಚಿಸಲಾಯಿತು.
- 9ನೇ ಅಡ್ಡರಸ್ತೆಯಲ್ಲಿ ಮರದ ಏಣಿಗಳನ್ನು ಪಾದಚಾರಿ ರಸ್ತೆಯಲ್ಲಿರುವುದನ್ನು ತೆರವುಗೊಳಿಸಲು ಕೋರಿದರು.
- ಎಸ್‌ಬಡ್ಲ್ಯೂಡಿಯಲ್ಲಿ ಸೀವೇಜ್ ನೀರು ಹರಿಯುವುದನ್ನು ತಡೆಯಲು ಕೋರಿದರು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.
- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Ramu

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Nagesh. H.

ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ನಂ. 177
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ